ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1508
2.	ಪ್ರಶ್ನೆ ಕೇಳಿದ ಸದಸ್ಯರು	ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3.	ಉತ್ತರಿಸುವ ದಿನಾಂಕ	19.03.2020
4.	ಉತ್ತರಿಸಬೇಕಾದ ಸಚಿವರು	ಮಾನ್ಯ ಮುಖ್ಯಮಂತ್ರಿಯವರು

	ಪ್ರಶ್ನೆ	ಉತ್ತರ
(ಅ)	ಹಾಸನ ಜಿಲ್ಲೆಯಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಎಷ್ಟು ಪ್ರಕರಣಗಳು ಕಂಡು ಬಂದಿವೆ; (ಪ್ರಕರಣವಾರು ಮಾಹಿತಿ ನೀಡುವುದು)	ಹೌದು. ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ 12 ಪ್ರಕರಣಗಳಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗಿದ್ದು, ಸದರಿ ಪ್ರಕರಣಗಳ ವಿವರ ಮತ್ತು ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮದ ಪ್ರಕರಣವಾರು ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.
(ಆ)	ಈ ಪ್ರಕರಣಗಳಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಂಡಿದ್ದಲ್ಲಿ, ಪ್ರಕರಣವಾರು ಮಾಹಿತಿ ನೀಡುವುದು;	
(ಇ)	ಶಿಷ್ಟಾಚಾರ ಪಾಲನೆ ಮಾಡುವ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಹೊರಡಿಸಲಾದ ಆದೇಶ/ಸುತ್ತೋಲೆಗಳನ್ನು ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದರಿಂದ ಶಿಷ್ಟಾಚಾರ ಪಾಲನೆ ಮಾಡಲು ಇನ್ನಷ್ಟು ಪರಿಣಾಮಕಾರಿ ಕಾನೂನು ರೂಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಕೈಗೊಳ್ಳುವುದು? (ಮಾಹಿತಿ ನೀಡುವುದು)	ಶಿಷ್ಟಾಚಾರ ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ಸಲುವಾಗಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ. 1)ಸರ್ಕಾರದ ಸಭೆ ಸಮಾರಂಭಗಳ ಆಯೋಜನೆಯಲ್ಲಿ ಪಾಲಿಸಬೇಕಾದ ಶಿಷ್ಟಾಚಾರ ಕುರಿತು ಸುತ್ತೋಲೆ ಸಂಖ್ಯೆ:ಸಿಆಸುಇ 34 ಹೆಚ್.ಪಿ.ಎ 2018(1), ದಿನಾಂಕ:16.04.2019ರಲ್ಲಿ ಸಮಗ್ರ ಸೂಚನೆಗಳನ್ನು ನೀಡಲಾಗಿದೆ.

		2)ದಿನಾಂಕ:16.04.2019ರ ಸುತ್ತೋಲೆಯಲ್ಲಿನ ಸೂಚನೆಗಳನ್ನು ಪಾಲಿಸುವ ಕುರಿತು ಎಲ್ಲಾ ಜಿಲ್ಲೆಗಳ ಅಪರ ಜಿಲ್ಲಾಧಿಕಾರಿಗಳಿಗೆ ದಿನಾಂಕ:17.12.2019ರಂದು ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು, ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ. 3)ಶಿಷ್ಟಾಚಾರ ಪಾಲನೆಯ ಬಗ್ಗೆ ಪರಿಶೀಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಮೇಲ್ವಿಚಾರಣಾ ಕೋಶವನ್ನು ರಚಿಸಲಾಗಿದೆ. ಮೇಲ್ವಿಚಾರಣಾ ಕೋಶವು ದಿನಾಂಕ:07.01.2020ರಂದು ವಿವಿಧ ಇಲಾಖೆಗಳಲ್ಲಿ ಬಾಕಿ ಇರುವ ಶಿಷ್ಟಾಚಾರ ಉಲ್ಲಂಘನೆ ಪ್ರಕರಣಗಳನ್ನು ಪರಿವೀಕ್ಷಿಸಿದ್ದು, ಕಾಲಮಿತಿಯೊಳಗೆ ಇತ್ಯರ್ಥ ಪಡಿಸಿ, ವರದಿ ನೀಡುವಂತೆ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರುಗಳಿಗೆ ಸೂಚನೆ ನೀಡಲಾಗಿದೆ.

(ಸಂಖ್ಯೆ:ಸಿಆಸುಇ 16 ಹೆಚ್.ಪಿ.ಎ 2020)

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ

ಅನುಬಂಧ

ಕ್ರ.ಸಂ.	ದೂರು ನೀಡಿದ ಶಾಸಕರ/ ಸಂಸತ್ ಸದಸ್ಯರ ಹೆಸರು/ಕ್ಷೇತ್ರ/ಪತ್ರದ ದಿನಾಂಕ	ದೂರಿನ ಸಂಕ್ಷಿಪ್ತ ವಿವರ	ತೆಗೆದುಕೊಂಡ ಕ್ರಮ
1.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿ:8/12/2016 ರಂದು ಚನ್ನರಾಯಪಟ್ಟಣ ತಾಲ್ಲೂಕು ಶ್ರವಣಬೆಳಗೊಳ ಹೋಬಳಿ ಬೂಕನಬೆಟ್ಟದ ಶ್ರೀ ರಂಗನಾಥಸ್ವಾಮಿ ರಾಸುಗಳ ಜಾತ್ರೆಯ ಪೂರ್ವಭಾವಿ ಸಭೆಗೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಮಾನ್ಯ ಶಾಸಕರ ದೂರಿನ ಕುರಿತು ತಹಶೀಲ್ದಾರ್ ಚನ್ನರಾಯಪಟ್ಟಣ ತಾಲ್ಲೂಕು ಇವರಿಂದ ಸಮಜಾಯಿಷಿಯನ್ನು ಪಡೆಯಲಾಗಿದ್ದು, ಶ್ರೀ ರಂಗನಾಥಸ್ವಾಮಿ ದೇವಸ್ಥಾನದ ಸಮಿತಿಯವರು ಪೂರ್ವಭಾವಿ ಸಭೆಯನ್ನು ಸಮಿತಿಯ ಸದಸ್ಯರನ್ನು ಒಳಗೊಂಡಂತೆ ನಡೆಸಲಾಗಿದ್ದು, ಸರ್ಕಾರಿ ಸಭೆ ನಡೆಸಿರುವುದಿಲ್ಲವೆಂದು ಹಾಗೂ ಈ ವಿಚಾರವಾಗಿ ದಿನಾಂಕ:5/1/2017 ರಂದು ಅಧಿಕೃತವಾಗಿ ಮಾನ್ಯ ಶಾಸಕರ ಉಪಸ್ಥಿತಿಯಲ್ಲಿ ಸಭೆ ನಡೆಸಿದ್ದು, ಶಿಷ್ಟಾಚಾರ ಉಲ್ಲಂಘನೆ ಯಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ಆದ್ದರಿಂದ ಇನ್ನು ಮುಂದೆ ಸರ್ಕಾರಿ ಕಾರ್ಯಕ್ರಮಗಳನ್ನು ನಡೆಸುವ ಸಂದರ್ಭಗಳಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಕ್ರಮವಹಿಸಲು ಸೂಚಿಸಿದೆ.
2.	ಶ್ರೀ ಹೆಚ್.ಡಿ. ರೇವಣ್ಣ, ಮಾನ್ಯ ಶಾಸಕರು, ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ	ಶೀ ಡಿ.ಪಿ. ಸಂದೀಪ್‌ಕುಮಾರ್, ಯೋಧ ಇವರು ಜಮ್ಮು ಕಾಶ್ಮೀರದ ಗುರೇಜ್ ಶೆಟ್ಟರ್‌ನಲ್ಲಿ ದಿನಾಂಕ:25/01/2017 ರಂದು ಹಿಮ ಕುಸಿತದಿಂದ ಮರಣ ಹೊಂದಿದ್ದು, ರಾಜ್ಯ ಸರ್ಕಾರದಿಂದ ರೂ.25.00 ಲಕ್ಷಗಳ ಪರಿಹಾರವನ್ನು ಮಾನ್ಯ ಸದಸ್ಯರ ಗಮನಕ್ಕೆ ತರದೆ ವಿತರಣೆ ಮಾಡಿ ಶಿಷ್ಟಾಚಾರ ಉಲ್ಲಂಘನೆ ಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಮಾನ್ಯ ಸದಸ್ಯರ ದೂರಿನ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಂದಾಯ ಇಲಾಖೆಯು ಕ್ರಮ ಕೈಗೊಳ್ಳುತ್ತಿದೆ.
3.	ಶ್ರೀ ಹೆಚ್.ಡಿ. ರೇವಣ್ಣ, ಮಾನ್ಯ ಶಾಸಕರು, ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ	ರೈಲ್ವೆ ನಿಲ್ದಾಣದಲ್ಲಿ ನಡೆದ ಬೆಂಗಳೂರು–ಹಾಸನ ಹೊಸ ರೈಲ್ವೆ ಮಾರ್ಗ ಉದ್ಘಾಟನಾ ಸಮಾರಂಭಕ್ಕೆ ಆಹ್ವಾನಿಸದೇ ಪತ್ರಿಕೆಯಲ್ಲಿ ಮುದ್ರಿಸದೆ ಅವಮಾನ ಮಾಡಲಾಗಿದೆ ಎಂದು ಹಕ್ಕುಚ್ಯುತಿ ಉಂಟಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಮಾನ್ಯ ಸದಸ್ಯರ ದೂರಿನ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆಯು ಕ್ರಮ ಕೈಗೊಳ್ಳುತ್ತಿದೆ.
4.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿ:27/09/2017 ರಂದು ಶ್ರೀ ಹಾಸನಾಂಬ ದೇವಿಯ ಜಾತ್ರಾ ಮಹೋತ್ಸವದ ಸಭೆಗೆ ಆಹ್ವಾನವನ್ನು ನೀಡದೆ ಹಾಗೂ ಆಹ್ವಾನ ಪತ್ರಿಕೆಯಲ್ಲಿ ಹೆಸರನ್ನು ಮುದ್ರಿಸದೆ ಶಿಷ್ಟಚಾರ ಉಲ್ಲಂಘನೆಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಮಾನ್ಯ ಸದಸ್ಯರ ದೂರಿನ ಕುರಿತು ಜಿಲ್ಲಾಧಿಕಾರಿ, ಹಾಸನ ಜಿಲ್ಲೆ ಇವರಿಂದ ವರದಿಯನ್ನು ಪಡೆಯಲಾಗಿದ್ದು, ಪ್ರಕರಣವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ.

5.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ಹಾಸನ ನಗರದಲ್ಲಿ ನೂತನವಾಗಿ ನಿರ್ಮಿಸಿರುವ ರೆಡ್‌ಕ್ರಾಸ್ ಭವನದ ಉದ್ಘಾಟನಾ ಹಾಗೂ ಶ್ರವಣಬೆಳಗೊಳ ಕ್ಷೇತ್ರದ ವ್ಯಾಪ್ತಿಯಲ್ಲಿನ ರಸ್ತೆ ಒಳಚರಂಡಿ ಕಾಮಗಾರಿಗಳ ಚಾಲನೆ ಕಾರ್ಯಕ್ರಮಕ್ಕೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘಿಸಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಮಾನ್ಯ ಸದಸ್ಯರ ದೂರಿನ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಂದಾಯ ಇಲಾಖೆಯು ಕ್ರಮ ಕೈಗೊಳ್ಳುತ್ತಿದೆ.
6.	ಶ್ರೀ ಹೆಚ್.ಡಿ. ರೇವಣ್ಣ, ಮಾನ್ಯ ಶಾಸಕರು, ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ	ದಿನಾಂಕ:7/2/2018 ರಂದು ನಡೆದ ಮಹಾಮಸ್ತಕಾಭಿಷೇಕ-2018 ರ ಉದ್ಘಾಟನಾ ಸಮಾರಂಭದಲ್ಲಿ ಮಾನ್ಯ ಹಾಸನ ಜಿಲ್ಲಾ ಉಸ್ತುವಾರಿ ಸಚಿವರು ಅವಮಾನ ಮಾಡಿರುವುದಾಗಿ ದೂರು ನೀಡಿರುವ ಕುರಿತು	ಮಾನ್ಯ ಸದಸ್ಯರ ದೂರಿನ ಬಗ್ಗೆ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಂದಾಯ ಇಲಾಖೆಯು ಕ್ರಮ ಕೈಗೊಳ್ಳುತ್ತಿದೆ.
7.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿನಾಂಕ:1/7/2018 ರಂದು ಹಾಸನ ನಗರದ ಸರ್ಕಾರಿ ಪ್ರೌಢ ಶಾಲೆ ಮೈದಾನದ ಆವರಣದಲ್ಲಿ ಹಿಮ್ಸ್ ಸಂಸ್ಥೆಯು ನಿರ್ಮಾಣ ಮಾಡುತ್ತಿರುವ ವಿದ್ಯಾರ್ಥಿನಿಯರ ಹಾಸ್ಟೆಲ್ ಕಾಮಗಾರಿ ಶಂಕು ಸ್ಥಾಪನೆಗೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆ ಆಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಜಿಲ್ಲಾಧಿಕಾರಿ, ಹಾಸನ ಜಿಲ್ಲೆ ಇವರ ವರದಿಯನ್ನಾಧರಿಸಿ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಲಾಗದ್ದು, ಈ ಅಂಶವನ್ನು ಮಾನ್ಯ ಶಾಸಕರ ಗಮನಕ್ಕೆ ತರಲಾಗಿದೆ.
8.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿನಾಂಕ:15/7/2018 ರಂದು ಹಾಸನ-ಮಂಗಳೂರು ಎನ್‌ಹೆಚ್-75 ರ ಶಿರಾಡಿಘಾಟ್ ರಸ್ತೆಯ ಉದ್ಘಾಟನಾ ಕಾರ್ಯಕ್ರಮಕ್ಕೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆ ಮಾಡಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಜಿಲ್ಲಾಧಿಕಾರಿ, ಹಾಸನ ಜಿಲ್ಲೆ ಇವರ ವರದಿಯನ್ನಾಧರಿಸಿ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಲಾಗದ್ದು, ಈ ಅಂಶವನ್ನು ಮಾನ್ಯ ಶಾಸಕರ ಗಮನಕ್ಕೆ ತರಲಾಗಿದೆ.
9.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿನಾಂಕ:14/7/2018 ರಂದು ಗೊರೂರು ಹೇಮಾವತಿ ಜಲಾಶಯದಿಂದ ನೀರನ್ನು ಹರಿಸುವ ಉದ್ಘಾಟನಾ ಕಾರ್ಯಕ್ರಮಕ್ಕೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಜಿಲ್ಲಾಧಿಕಾರಿ, ಹಾಸನ ಜಿಲ್ಲೆ ಇವರ ವರದಿಯನ್ನಾಧರಿಸಿ ಸಂಬಂಧಪಟ್ಟವರಿಗೆ ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಲಾಗಿದ್ದು, ಈ ಅಂಶವನ್ನು ಮಾನ್ಯ ಶಾಸಕರ ಗಮನಕ್ಕೆ ತರಲಾಗಿದೆ.
10.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿನಾಂಕ:13/12/2019 ರಂದು ಅರಕಲಗೂಡು ತಾಲ್ಲೂಕಿನ ಮುಸವತ್ತೂರು ಗ್ರಾಮದ ಬಳಿ 190 ಕೋಟಿ ವೆಚ್ಚದಲ್ಲಿ ಮಲ್ಲಿಪಟ್ಟಣ ಏತನೀರಾವರಿ ಕಾಮಗಾರಿಯ ಭೂಮಿ ಪೂಜೆಗೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

11.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿನಾಂಕ:23/10/2019 ರಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ಮಾಣಗೊಳ್ಳುತ್ತಿರುವ 7.00 ಕೋಟಿ ರೂ. ವೆಚ್ಚದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಯ ಭೂಮಿ ಪೂಜೆಗೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.
12.	ಶ್ರೀ. ಎಂ.ಎ.ಗೋಪಾಲಸ್ವಾಮಿ, ಮಾನ್ಯ ಶಾಸಕರು, ವಿಧಾನ ಪರಿಷತ್.	ದಿನಾಂಕ:6/1/2020 ರಂದು ಹಿರೀಸಾವೆ ಶ್ರವಣಬೆಳಗೊಳ ಏತ ನೀರಾವರಿ ಯೋಜನೆಗೆ 2.00 ಕೋಟಿ ವೆಚ್ಚದ ಪ್ರತ್ಯೇಕ ನೇರ ವಿದ್ಯುತ್ ಸರಬರಾಜು ಘಟಕವನ್ನು ಚಾಲನೆ ನೀಡುವ ಕಾರ್ಯಕ್ರಮಕ್ಕೆ ಆಹ್ವಾನಿಸದೆ ಶಿಷ್ಟಾಚಾರ ಉಲ್ಲಂಘನೆಯಾಗಿರುವುದಾಗಿ ದೂರು ಸಲ್ಲಿಸಿರುವ ಕುರಿತು	ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.